# All India Radio: Bangalore
## 15.08.2024 / 2.30 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

**ಮುಖ್ಯಾಂಶಗಳು**

1. **78ನೇ ಸ್ವಾತಂತ್ರ್ಯೋತ್ಸವ ಸಂಭ್ರಮ; ನಾಡಿನ ಜನತೆಗೆ ಶುಭಾಷಯ ಕೋರಿದ ಮುಖ್ಯಮಂತ್ರಿ**
2. **ಯಾವುದೇ ಕಾರಣಕ್ಕೂ ಸರ್ಕಾರದ ಪಂಚ ಯೋಜನೆಗಳನ್ನು ನಿಲ್ಲಿಸುವುದಿಲ್ಲ; ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ**
3. **ನಾಡಿನಾದ್ಯಂತ ಇಂದು ಸಡಗರದ ಸ್ವಾತಂತ್ರ್ಯೋತ್ಸವ ಆಚರಣೆ**
4. **ಮುಂಬರುವ ವರ್ಷದ ಆರಂಭದಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ; ಭಾರತೀಯ ಚುನಾವಣಾ ಆಯೋಗ**

****************

ದೇಶಾದ್ಯಂತ ಇಂದು 78ನೇ ಸ್ವಾತಂತ್ರ್ಯ ದಿನಾಚರಣೆಯನ್ನು ದೇಶಾಭಿಮಾನ, ಸಡಗರ, ಸಂಭ್ರಮದೊಂದಿಗೆ ಆಚರಿಸಲಾಗುತ್ತಿದೆ. ಬೆಂಗಳೂರಿನ ಮಾಣೆಕ್ ಷಾ ಮೈದಾನದಲ್ಲಿ ನಡೆದ ರಾಜ್ಯಮಟ್ಟದ ಪ್ರಮುಖ ಸಮಾರಂಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಧ್ವಜಾರೋಹಣ ನೆರವೇರಿಸಿದರು. ಬಳಿಕ ತೆರೆದ ಜೀಪಿನಲ್ಲಿ ಎಲ್ಲಾ ತುಕಡಿಗಳ ಪಥಸಂಚಲನ ಪರಿವೀಕ್ಷಿಸಿ ಗೌರವ ರಕ್ಷೆ ಸ್ವೀಕರಿಸಿದರು.

ನಂತರ ನಾಡಿನ ಸಮಸ್ತ ಜನತೆಯನ್ನುದ್ದೇಶಿಸಿ ಸಂದೇಶ ನೀಡಿದ ಅವರು, ಸ್ವಾತಂತ್ರ್ಯೋತ್ಸವ ಎನ್ನುವುದು ಕೇವಲ ಸಂಭ್ರಮಾಚರಣೆಯ ದಿನ ಆಗಬಾರದು, ಇದು ಪ್ರಜೆಗಳಾದ ನಮ್ಮೆಲ್ಲರ ಕರ್ತವ್ಯವನ್ನು ನೆನಪು ಮಾಡಿಕೊಳ್ಳುವ ದಿನವೂ ಆಗಬೇಕು ಎಂದರು.

ಪ್ರಜೆಗಳಾಗಿ ನಾವು ಪ್ರತಿಕ್ಷಣವೂ ಜಾಗೃತರಾಗಿದ್ದು ಸಂವಿಧಾನ ಮತ್ತು ಪ್ರಜಾಪ್ರಭುತ್ವವನ್ನು ದಮನ ಮಾಡುವ ದುಷ್ಟಶಕ್ತಿಗಳ ಕುಟಿಲ ಪ್ರಯತ್ನವನ್ನು ವಿಫಲಗೊಳಿಸಿ ಅದನ್ನು ರಕ್ಷಿಸುವ ಜವಾಬ್ದಾರಿಯನ್ನು ನಿರ್ವಹಿಸಬೇಕಾಗುತ್ತದೆ. ಈ ಕರ್ತವ್ಯದ ಪಾಲನೆಯೇ ನಿಜವಾದ ದೇಶಭಕ್ತಿ, ಇದು ತ್ಯಾಗ–ಬಲಿದಾನದ ಮೂಲಕ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಹಿರಿಯರಿಗೆ ಸಲ್ಲಿಸುವ ಗೌರವವೂ ಹೌದು ಎಂದು ತಿಳಿಸಿದರು.

ರಾಜ್ಯದ ಜನರ ಶ್ರೇಯೋಭಿವೃದ್ಧಿ ಸಾಧಿಸಲು ನಮ್ಮ ಸರ್ಕಾರ ಬದ್ಧವಾಗಿದೆ ಎಂದು ಹೇಳಿದ ಅವರು, ಯಾವುದೇ ಕಾರಣಕ್ಕೂ ಪಂಚ ಯೋಜನೆಗಳನ್ನು ನಿಲ್ಲಿಸುವುದಿಲ್ಲ ಎಂದು ಭರವಸೆ ನೀಡಿದರು.

ಪಂಚಖಾತ್ರಿ ಯೋಜನೆಗಳ ಯಶಸ್ಸಿನ ಕುರಿತು ಪ್ರಸ್ತಾಪಿಸದ ಅವರು, ಈ ಯೋಜನೆಗಳಿಂದ ದೇಶದ ಎಲ್ಲಾ ವರ್ಗದ ಜನರಿಗೆ ಪ್ರಯೋಜನವಾಗಿದೆ. ಶಕ್ತಿ ಯೋಜನೆಯಡಿ ಮಹಿಳೆಯರ ಸುಮಾರು 6 ಸಾವಿರದ 541 ಕೋಟಿ ರೂಪಾಯಿ ಪ್ರಯಾಣ ವೆಚ್ಚ ಉಳಿತಾಯ ಮಾಡಲಾಗಿದೆ.

ಗೃಹಲಕ್ಷ್ಮಿ ಯೋಜನೆಯಡಿ 1 ಕೋಟಿ 20 ಲಕ್ಷ ಮಹಿಳೆಯರಿಗೆ ಈವರೆಗೆ 25 ಸಾವಿರದ 259 ಕೋಟಿ ರೂಪಾಯಿ ನೇರವಾಗಿ ಅವರ ಬ್ಯಾಂಕ್ ಖಾತೆಗೆ ವರ್ಗಾಯಿಸಲಾಗಿದೆ. ಕೇಂದ್ರ ಸರ್ಕಾರದ ಅಸಹಕಾರದ ನಡುವೆ ಅನ್ನಭಾಗ್ಯ ಯೋಜನೆಯಡಿ ಹೆಚ್ಚುವರಿ ಅಕ್ಕಿ ಬದಲಿಗೆ ನಗದು ವರ್ಗಾವಣೆ ಮಾಡಲಾಗುತ್ತಿದ್ದು, 4 ಕೋಟಿಗೂ ಅದಿಕ ಫಲಾನುಭವಿಗಳಿಗೆ 7 ಸಾವಿರದ 763 ಕೋಟಿ ರೂಪಾಯಿ ನೇರವಾಗಿ ವರ್ಗಾಯಿಸಲಾಗಿದೆ.

ಗೃಹಜ್ಯೋತಿ ಯೋಜನೆಯ ಸೌಲಭ್ಯವನ್ನು 1 ಕೋಟಿ 60 ಲಕ್ಷ ಕುಟುಂಬಗಳು ಪಡೆದುಕೊಳ್ಳುತ್ತಿದ್ದು, ಈ ಯೋಜನೆಗೆ 8 ಸಾವಿರದ 844 ಕೋಟಿ ರೂಪಾಯಿ ವೆಚ್ಚ ಮಾಡಲಾಗಿದೆ. ಹಾಗೆ ಯುವ ಸಮುದಾಯದ ಸಬಲೀಕರಣಕ್ಕೆ ಜಾರಿಗೊಳಿಸಲಾದ

ಯುವನಿಧಿ ಯೋಜನೆಯಡಿ 1 ಲಕ್ಷ 31 ಸಾವಿರ ಪದವಿ ಅಥವಾ ಡಿಪ್ಲೋಮಾ ಪಡೆದ ನಿರುದ್ಯೋಗಿಗಳಿಗೆ ನೆರವಿನ ರೂಪದಲ್ಲಿ 91 ಕೋಟಿ ರೂಪಾಯಿ ಭರಿಸಲಾಗಿದೆ ಎಂದು ಮಾಹಿತಿ ನೀಡಿದರು.

ಉಳಿದಂತೆ ದುರ್ಬಲ ವರ್ಗದವರಿಗೆ ನೀಡಲಾಗುವ ಮಾಸಿಕ ಪಿಂಚಣಿ, ಕೊಬ್ಬರಿ ಬೆಳೆಗಾರರು ಹಾಗೂ ಹಾಲು ಉತ್ಪಾದಕರಿಗೆ ನೀಡಿರುವ ಪ್ರೋತ್ಸಾಹಧನ ಕುರಿತು ಅಂಕಿ ಅಂಶ ಸಮೇತ ಮಾಹಿತಿ ನೀಡಿದ ಅವರು ತಮ್ಮ ಸರ್ಕಾರ ಎಲ್ಲರೊಂದಿಗೆ ನಿಂತಿದೆ ಎಂಬುದನ್ನು ಸ್ಪಷ್ಟಪಡಿಸಿದರು.

ತಮ್ಮ ಸರ್ಕಾರ ಅಧಿಕಾರಕ್ಕೆ ಬಂದ ನಂತರದ 2 ಮುಂಗಾರು ಹಂಗಾಮಿನಲ್ಲಿ ವಿಭಿನ್ನ ಪರಿಸ್ಥಿತಿ ಎದುರುಸಿರುವ ಕುರಿತು ತಿಳಿಸಿದ ಅವರು, ಮೊದಲ ವರ್ಷದ ಬರಗಾಲ ಮತ್ತು ಈ ವರ್ಷದ ಅತೀವೃಷ್ಟಿ ಪರಿಸ್ಥಿತಿಗಳನ್ನು ಸರ್ಕಾರ ಮುನ್ನೆಚರಿಕೆಯೊಂದಿಗೆ ಪರಿಸ್ಥಿತಿಯನ್ನು ನಿಭಾಯಿಸಿದೆ. ಎನ್‌ಡಿಆರ್‌ಎಫ್ ಪರಿಹಾರ ಬಿಡುಗಡೆಯಾಗುವ ಮೊದಲೇ ರಾಜ್ಯ ಸರ್ಕಾರ ಬರಗಾಲ ಪೀಡಿತ ರೈತರಿಗೆ 2 ಸಾವಿರ ರೂಪಾಯಿವರೆಗೆ ಒಟ್ಟು 636 ಕೋಟಿ 45 ಲಕ್ಷ ರೂಪಾಯಿ ಮಧ್ಯಂತರ ಪರಿಹಾರ ವಿತರಿಸಿದೆ.

ಒಟ್ಟಾರೆಯಾಗಿ ಎನ್‌ಡಿಆರ್‌ಎಫ್ ಅಡಿ 38 ಲಕ್ಷದ 58 ಸಾವಿರಕ್ಕೂ ಹೆಚ್ಚು ರೈತರಿಗೆ 3 ಸಾವಿರದ 450 ಕೋಟಿ ರೂಪಾಯಿಗೂ ಹೆಚ್ಚು ಬೆಳೆಹಾನಿ ಪರಿಹಾರ ವಿತರಿಸಲಾಗಿದೆ. ಇನ್ನೂ ಪ್ರವಾಹ ಪೀಡಿತ ಪ್ರದೇಶಗಳಿಗೆ ತಾವೇ ಭೇಟಿ ನೀಡಿರುವ ಕುರಿತು ತಿಳಿಸಿರುವ ಮುಖ್ಯಮಂತ್ರಿ ಮನೆ ಕಳೆದುಕೊಂಡವರಿಗೆ 1 ಲಕ್ಷ 20 ಸಾವಿರ ರೂಪಾಯಿ ಪರಿಹಾರದೊಂದಿಗೆ ಮನೆಹಂಚಿಕೆ ಕುರಿತು ಕ್ರಮವಹಿಸಲಾಗಿದೆ ಎಂದರು.

ಭೂಕುಸಿತ ತಡೆಗಟ್ಟುವ ನಿಟ್ಟಿನಲ್ಲಿ ಸರ್ಕಾರ ಕಾರ್ಯಪ್ರವೃತ್ತವಾಗಿದ್ದು, ಭೂವೈಜ್ಞಾನಿಕ ಸರ್ವೇಕ್ಷಣಾ ಸಂಸ್ಥೆ ಗುರುತಿಸಿರುವ ಪಶ್ಚಿಮ ಘಟ್ಟಗಳ ವ್ಯಾಪ್ತಿಯ 7 ಜಿಲ್ಲೆಗಳಲ್ಲಿನ ಭೂಕುಸಿತ ಸಂಭವಿಸಬಹುದಾದ 1 ಸಾವಿರದ 351 ಗ್ರಾಮಗಳಲ್ಲಿ ಇನ್‌ಸ್ಟಿಟ್ಯೂಟ್ ಆಫ್ ರಾಕ್ ಮೆಕ್ಯಾನಿಕ್ಸ್ (NIRM). ಸಹಯೋಗದೊಂದಿಗೆ ನೂರು ಕೋಟಿ ರೂಪಾಯಿ ವೆಚ್ಚದಲ್ಲಿ ಉಪಶಮನ ಕ್ರಮ ಕೈಗೊಳ್ಳಲಾಗುತ್ತದೆ ಎಂದರು.

ವಿವಿಧ ವಸತಿ ಯೋಜನೆಯಡಿ ಒಟ್ಟು 3 ಸಾವಿರದ 690 ಕೋಟಿ ರೂಪಾಯಿ ವೆಚ್ಚದಲ್ಲಿ 2 ಲಕ್ಷ 38 ಸಾವಿರ ಮನೆಗಳನ್ನು ಪೂರ್ಣಗೊಳಿಸಲಾಗಿದೆ. ಪಿಎಂ ಆವಾಸ್ ಯೋಜನೆಯಡಿ ಈಗಾಗಲೇ 36 ಸಾವಿರ 781 ಮನೆಗಳನ್ನು ಪೂರ್ಣಗೊಳಿಸಿ ಫಲಾನುಭವಿಗಳಿಗೆ ಹಸ್ತಾಂತರಿಸಲಾಗಿದೆ.

2023–24ನೇ ಸಾಲಿನಲ್ಲಿ ರಾಜ್ಯ 54 ಸಾವಿರದ 427 ಕೋಟಿ ರೂಪಾಯಿ ಆಕರ್ಶಿಸುವುದರೊಂಗಿದೆ ವಿದೇಶಿ ಬಂಡವಾಳ ಹೂಡಿಕೆಯಲ್ಲಿ ದೇಶದಲ್ಲೇ 3ನೇ ಸ್ಥಾನದಲ್ಲಿದೆ. ರಾಜ್ಯಕ್ಕೆ ದೇಶಿಯ ಹಾಗೂ ಅಂತರಾಷ್ಟ್ರೀಯ ಮಟ್ಟದಲ್ಲಿ ಇನ್ನೂ ಹೆಚ್ಚಿನ ಬಂಡವಾಳ ಆಕರ್ಶಿಸುವ ನಿಟ್ಟಿನಲ್ಲಿ ಇನ್ವೆಸ್ಟ್ ಕರ್ನಾಟಕ ಸಮಾವೇಶವನ್ನು 2025ರ ಫೆಬ್ರವರಿಯಲ್ಲಿ ಆಯೋಜಿಸಲಾಗುತ್ತಿದೆ ಎಂದು ಮುಖ್ಯಮಂತ್ರಿ ಮಾಹಿತಿ ನೀಡಿದರು.

ಹಾಗೆಯೇ 1 ಲಕ್ಷಕ್ಕೂ ಹೊಸ ಉದ್ಯೋಗ ಸೃಷ್ಟಿ ಸೇರಿದಂತೆ ಸಂಪೂರ್ಣ ಕ್ಲೀನ್ ಮೊಬಿಲಿಟಿ ವಾಹನ ಮೌಲ್ಯ ಸರಪಳಿಯಲ್ಲಿ 50 ಸಾವಿರ ಕೋಟಿ ರೂಪಾಯಿ ಹೂಡಿಕೆ ಆಕರ್ಶಿಸುವ 'ಕರ್ನಾಟಕ ಕ್ಲೀನ್ ಮೊಬಿಲಿಟಿ ಪಾಲಿಸಿ 2024–29' ಕರುಡು ನೀತಿಯನ್ನು ಸಿದ್ದಪಡಿಸಲಾಗಿದ್ದು ಅನುಮೋದನೆಯ ಹಂತದಲ್ಲಿದೆ ಎಂದರು.

****************

ರಾಜ್ಯದ ವಿವಿಧ ಜಿಲ್ಲೆಗಳಲ್ಲಿ 78ನೇ ಸ್ವಾತಂತ್ರ್ಯೋತ್ಸವವನ್ನು ಸಡಗರ ಸಂಭ್ರಮದಿಂದ ಆಚರಿಸಲಾಗುತ್ತಿದೆ.

**ಚಿತ್ರದುರ್ಗದ ಜಿಲ್ಲೆಯ** ಮುರುಘರಾಜೇಂದ್ರ ಕ್ರೀಡಾಂಗಣದಲ್ಲಿ 78ನೇ ಸ್ವಾತಂತ್ರ್ಯೋತ್ಸವದ ಅಂಗವಾಗಿ ಡಿ.ಸುಧಾಕರ್ ಯೋಜನೆ ಮತ್ತು ಸಾಂಖ್ಯಿಕ ಹಾಗೂ ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವರು ಧ್ವಜಾರೋಹಣ ನೆರವೇರಿಸಿದರು. ನಂತರ ಮಾತನಾಡಿದ

ಡಿ. ಸುಧಾಕರ್ ಈ ದಿನದ ಮತ್ತೊಂದು ವಿಶೇಷ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣರ ಜನುಮ ದಿನ. ಅವರ ತ್ಯಾಗ ಬಲಿದಾನಕ್ಕೆ ನನ್ನ ಭಕ್ತಿ ಪೂರ್ವಕ ನಮನ ಸಲ್ಲಿಸುತ್ತೇನೆ ಎಂದರು.

**ಬಳ್ಳಾರಿ ನಗರದ** ಬಿಮ್ಸ್ ಮೈದಾನದಲ್ಲಿ ಇಂದು ನಡೆದ 78ನೇ ಸ್ವಾತಂತ್ರ್ಯ ಮಹೋತ್ಸವ ಸಮಾರಂಭದಲ್ಲಿ ಕಂದಾಯ ಸಚಿವ ಕೃಷ್ಣ ಭೈರೇಗೌಡ ರಾಷ್ಟ್ರ ಧ್ವಜಾರೋಹಣ ನೆರವೇರಿಸಿದರು. ಪಥ ಸಂಚಲನ ನಡೆಸಿ ಪೊಲೀಸ್ ಶಸ್ತ್ರಪಡೆ, ಗೃಹರಕ್ಷಕ ದಳ, ಎನ್‌ಸಿಸಿ, ಭಾರತ್ ಸ್ಕೌಟ್ಸ್, ಸೇವಾದಳ, ಶಾಲಾ ಮಕ್ಕಳ 30 ತುಕಡಿಗಳಿಂದ ಧ್ವಜವಂದನೆ ಸ್ವೀಕರಿಸಿದರು.

**ಕೊಪ್ಪಳ ನಗರದ** ಗದಗ ರಸ್ತೆಯ ಜಿಲ್ಲಾ ಕ್ರೀಡಾಂಗಣದಲ್ಲಿ ಇಂದು ಬೆಳಿಗ್ಗೆ 9 ಗಂಟೆಗೆ 78ನೇ ಸ್ವಾತಂತ್ರ್ಯೋತ್ಸವ ದಿನಾಚರಣೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಹಾಗೂ ಕೊಪ್ಪಳ ಜಿಲ್ಲೆಯ ಉಸ್ತುವಾರಿ ಸಚಿವರಾದ ಶಿವರಾಜ್ ತಂಗಡಗಿ ಚಾಲನೆ ನೀಡಿದರು.

**ಮಂಡ್ಯ ನಗರದ** ಸರ್.ಎಂ.ವಿಶ್ವೇಶ್ವರಯ್ಯ ಕ್ರೀಡಾಂಗಣದಲ್ಲಿ ಸ್ವಾತಂತ್ರ್ಯ ದಿನಾಚರಣೆಯ ಅಂಗವಾಗಿ ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ಅವರು ಧ್ವಜಾರೋಹಣ ನೆರವೇರಿಸಿದರು. ಈ ಸಂದರ್ಭದಲ್ಲಿ ಪೊಲೀಸ್ ಮತ್ತು ವಿದ್ಯಾರ್ಥಿಗಳ ಕವಾಯತು ಗಮನ ಸೆಳೆಯಿತು.

**ದಾವಣಗೆರೆ ಜಿಲ್ಲಾ** ಕ್ರೀಡಾಂಗಣದಲ್ಲಿಂದು 78ನೇ ಸ್ವಾತಂತ್ರ್ಯೋವದಲ್ಲಿ ಧ್ವಜಾರೋಹಣವನ್ನು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ ನೆರವೇರಿಸಿ ಮಾತನಾಡಿದ ಅವರು ಏತ ನೀರಾವರಿ ಯೋಜನೆಗಳ ಮೂಲಕ ದಾವಣಗೆರೆ ಜಿಲ್ಲೆಯನ್ನು ಸಮಗ್ರ ನೀರಾವರಿಗೆ ಒಳಪಡಿಸಲು ಉದ್ದೇಶಿಸಲಾಗಿದೆ ಎಂದರು.

**ರಾಮನಗರದ ಜಿಲ್ಲಾ** ಕ್ರೀಡಾಂಗಣದಲ್ಲಿ 78ನೇ ಸ್ವಾತಂತ್ರ್ಯ ದಿನವನ್ನು ಅರ್ಥಪೂರ್ಣವಾಗಿ ಆಚರಣೆ ಮಾಡಲಾಯಿತು. ರಾಮನಗರ ಜಿಲ್ಲಾ ಉಸ್ತುವಾರಿ ಸಚಿವರಾದ ರಾಮಲಿಂಗ ರೆಡ್ಡಿ ಅವರು ಧ್ವಜಾರೋಹಣ ನೆರವೇರಿಸಿ ಧ್ವಜ ವಂದನೆ ಸ್ವೀಕರಿಸಿದರು. ಪೊಲೀಸ್ ಇಲಾಖೆ, ಗೃಹ ರಕ್ಷಕ ದಳ 18 ತಂಡಗಳಿಂದ ಗೌರವ ವಂದನೆ ಸ್ವೀಕರಿಸಿದರು.

**ಯಾದಗಿರಿ ನಗರದ** ಜಿಲ್ಲಾ ಕ್ರೀಡಾಂಗಣದಲ್ಲಿ ಇಂದು 78ನೇ ಸ್ವಾತಂತ್ರ್ಯ ದಿನಾಚರಣೆಯಂದು ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ವಿವಿಧ ಕವಾಯತು ಪಡೆಗಳಿಂದ ಗೌರವ ವಂದನೆ ಸ್ವೀಕರಿಸಿ, ರಾಷ್ಟ್ರಧ್ವಜಾರೋಹಣ ನೆರವೇರಿಸಿದರು.

**ಚಿಕ್ಕಬಳ್ಳಾಪುರ ಜಿಲ್ಲಾಡಳಿತ** ಹಾಗೂ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಇಂದು ಚಿಕ್ಕಬಳ್ಳಾಪುರದ ಜಿಲ್ಲಾ ಸರ್.ಎಂ.ವಿ.ಕ್ರೀಡಾಂಗಣದಲ್ಲಿ ಆಯೋಜಿಸಿದ್ದ 78ನೇ ಸ್ವಾತಂತ್ರ್ಯೋತ್ಸವದ ಧ್ವಜಾರೋಹಣವನ್ನು ಉನ್ನತ ಶಿಕ್ಷಣ ಸಚಿವರೂ ಆದ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ನೆರವೇರಿಸಿದರು.

**ಮೈಸೂರು ಜಿಲ್ಲೆಯಲ್ಲಿ** ಅದ್ದೂರಿಯಾಗಿ 78ನೇ ಸ್ವಾತಂತ್ರೋತ್ಸವ ದಿನಾಚರಣೆಯನ್ನು ನಗರದ ಬನ್ನಿಮಂಟಪ ಪಂಜಿನ ಕವಾಯತು ಮೈದಾನದಲ್ಲಿ ಆಚರಣೆ ಮಾಡಲಾಯಿತು. ಸಮಾಜ ಕಲ್ಯಾಣ ಇಲಾಖೆಯ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಹೆಚ್.ಸಿ. ಮಹದೇವಪ್ಪ ಅವರು ಧ್ವಜಾರೋಹಣ ನೆರವೇರಿಸಿ ಧ್ವಜವಂದನೆ ಸ್ವೀಕರಿಸಿದರು.

****************

ಭಾರತ ಚುನಾವಣಾ ಆಯೋಗವು ಮುಂಬರುವ 2025 ರ ಜನವರಿ 1 ರಿಂದ ಅರ್ಹತಾ ಭಾವಚಿತ್ರ ಸಹಿತ ಮತದಾರರ ಪಟ್ಟಿಗಳ ಪರಿಷ್ಕರಣೆಯ ವೇಳಾಪಟ್ಟಿಯನ್ನು ಹೊರಡಿಸಿದೆ.

ಪೂರ್ವ ಪರಿಷ್ಕರಣೆ ಚಟುವಟಿಕೆಗಳ ಸಮಯದಲ್ಲಿ ರಾಜ್ಯದ ಎಲ್ಲಾ ಮತಗಟ್ಟೆ ಮಟ್ಟದ ಅಧಿಕಾರಿಗಳು ಪ್ರತಿ ಮನೆಗೂ ಭೇಟಿ ನೀಡಿ ಪರಿಶೀಲನೆ ಕೈಗೊಳ್ಳುತ್ತಾರೆ. ಈ ಸಮಯದಲ್ಲಿ ಸಾರ್ವಜನಿಕರು ಯಾವುದೇ ರೀತಿಯ ತಿದ್ದುಪಡಿಗಳು, ಹೆಸರು ನೋಂದಣಿ, ಮೃತ ಮತ್ತು ಸ್ಥಳಾಂತರಗೊಂಡ ಮತದಾರರ ಹೆಸರುಗಳ ತೆಗೆದು ಹಾಕುವಿಕೆ ಮತ್ತು ಮುಂಬರುವ ಅರ್ಹತಾ ದಿನಾಂಕಗಳಂತೆ 18 ವರ್ಷ ತುಂಬುವ ಯುವ ಮತದಾರರ ಹೆಸರು ಸೇರ್ಪಡೆ ಕುರಿತು ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

********ಮುಕ್ತಾಯ********